ಕರ್ನಾಟಕ ಸರ್ಕಾರ

**ಕರ್ನಾಟಕ ಪರೀಕ್ಷಾ ಪ್ರಾಧಿಕಾರ**

ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560012.

ದೂರವಾಣಿ: 080–23 460 460 (5 ಲೈನ್ಸ್), ಫ್ಯಾಕ್ಸ್: 080–23461576 ಇ–ಮೇಲ್: keauthority-ka@nic.in ವೆಬ್‌ಸೈಟ್: http://kea.nic.in


**ಸಂಖ್ಯೆ: ಇಡಿ/ಕೆಇಎ/ಆಡಳಿತ/ಸಿ.ಆರ್.07/2022** **ದಿನಾಂಕ: 13–10–2022**

# ಅಧಿಸೂಚನೆ

## ಕರ್ನಾಟಕದಲ್ಲಿನ ವೈದ್ಯಕೀಯ ಮತ್ತು ದಂತ ವೈದ್ಯಕೀಯ ಕೋರ್ಸುಗಳ ಪ್ರವೇಶಕ್ಕಾಗಿ ಹಾಗೂ ಕರ್ನಾಟಕದ ವಿದ್ಯಾರ್ಥಿಗಳಿಗೆ ಆಯುಷ್ ಕೋರ್ಸುಗಳಿಗೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನ – 2022–23

1) ಸರ್ಕಾರವು ತನ್ನ ಆದೇಶ ಸಂಖ್ಯೆ ಆಕುಕ 124 ಆರ್‌ಜಿಯು ಬೆಂಗಳೂರು ದಿನಾಂಕ 28–06–2017 ರಲ್ಲಿ, ಎಲ್ಲಾ ಸರ್ಕಾರಿ, ಖಾಸಗಿ (ಅಲ್ಪ ಸಂಖ್ಯಾತವೂ ಸೇರಿದಂತೆ), ಕಾಲೇಜುಗಳಲ್ಲಿನ ಸರ್ಕಾರಿ, ಖಾಸಗಿ, ಎನ್‌ಆರ್‌ಐ, ಮತ್ತು ಇತರೆ ವೈದ್ಯಕೀಯ / ದಂತವೈದ್ಯಕೀಯ ಕೋರ್ಸುಗಳ ಪ್ರವೇಶಕ್ಕಾಗಿ ಏಕರೂಪದ ಕೌನ್ಸಿಲಿಂಗ್ ಅನ್ನು ನಡೆಸಲು ನಿರ್ದೇಶಿಸಿದೆ.

2) ಸರ್ಕಾರದ ನಿರ್ದೇಶನದಂತೆ, 2022–23ನೇ ಸಾಲಿಗೆ ವೈದ್ಯಕೀಯ / ದಂತ ವೈದ್ಯಕೀಯ ಕೋರ್ಸುಗಳ ಪ್ರವೇಶಕ್ಕೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರವು (ಕಪಪ್ರಾ) UGNEET-2022 ರಲ್ಲಿ ಅರ್ಹತೆಯನ್ನು ಪಡೆದಿರುವ ಹಾಗು ಅರ್ಹತಾ ಮಾನದಂಡಗಳನ್ನು ಪೂರೈಸುವ ಎಲ್ಲಾ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಿದೆ. UGNEET-2022 ರಲ್ಲಿ ನಿಗದಿಪಡಿಸಿರುವ ಕನಿಷ್ಠ ಅಂಕಗಳನ್ನು ಅಥವಾ ಅದಕ್ಕಿಂತ ಹೆಚ್ಚು ಅಂಕಗಳನ್ನು ಪಡೆದಿರುವ ಅಭ್ಯರ್ಥಿಗಳು ಮಾತ್ರ ವೈದ್ಯಕೀಯ / ದಂತ ವೈದ್ಯಕೀಯ / ಆಯುಷ್ ಕೋರ್ಸುಗಳ ಪ್ರವೇಶಕ್ಕೆ ನೊಂದಣಿ ಮಾಡಿಕೊಳ್ಳಲು ಅರ್ಹರಿರುತ್ತಾರೆ.

3) ಇದಲ್ಲದೆ, ಕರ್ನಾಟಕ ಆಯುಷ್ ಇಲಾಖೆಯ ದಿನಾಂಕ 13–10–2022ರ ಪತ್ರದ ಅನ್ವಯ, ಸರ್ಕಾರಿ, ಸರ್ಕಾರಿ ಅನುದಾನಿತ ಸಂಸ್ಥೆಗಳು ಮತ್ತು ಖಾಸಗಿ ಸಂಸ್ಥೆಗಳಲ್ಲಿನ ಪ್ರವೇಶಕ್ಕಾಗಿ 15% ಸೀಟು ಅಖಿಲ ಭಾರತ ಕೋಟ ಮತ್ತು 85% ಸೀಟುಗಳು ರಾಜ್ಯ ಹಾಗು ಯೂನಿಯನ್ ಟೆರಿಟರಿ ಸೀಟುಗಳಾಗಿರುತ್ತದೆ. ಈ ನಿರ್ದೇಶನದಂತೆ ಕರ್ನಾಟಕ ರಾಜ್ಯದ ಖಾಸಗಿ ಆಯುಷ್ ಕಾಲೇಜುಗಳಲ್ಲಿ ಲಭ್ಯವಾಗುವ ಸೀಟುಗಳು ಮತ್ತು ಆಡಳಿತ ಮಂಡಳಿಯ ಕೋಟದ ಸೀಟುಗಳನ್ನೂ ಸಹ ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ಹಂಚಿಕೆ ಮಾಡಲಾಗುವುದು. UGNEET-2022 ರಲ್ಲಿ ಅರ್ಹತೆಯನ್ನು ಪಡೆದಿರುವ ಅಭ್ಯರ್ಥಿಗಳು ಆಯುಷ್ ಸೀಟುಗಳಿಗೂ ಸಹ ನೊಂದಯಿಸಿಕೊಳ್ಳಬಹುದು.

4) ಕರ್ನಾಟಕೇತರ ಅಭ್ಯರ್ಥಿಗಳಿಗೆ ಯಾವುದೇ ಮೀಸಲಾತಿಯ ಸವಲತ್ತುಗಳು ಅನ್ವಯಿಸುವುದಿಲ್ಲ. ಆದ್ದರಿಂದ UGNEET- 2022 ರಲ್ಲಿ ಸಾಮಾನ್ಯ ವರ್ಗಕ್ಕೆ ನಿಗದಿಪಡಿಸಿರುವ ಕನಿಷ್ಠ ಅಂಕಗಳನ್ನು ಪಡೆದಿದ್ದಲ್ಲಿ ಮಾತ್ರ (50th Percentile) ಅರ್ಹತೆಯನ್ನು ಪಡೆಯಬಹುದಾಗಿದೆ ಹಾಗೂ ಪ್ರವೇಶಕ್ಕಾಗಿ ನೊಂದಣಿಯನ್ನು ಮಾಡಿ ಕೊಳ್ಳಬಹುದಾಗಿದೆ. SC / ST / OBC ಅರ್ಹತಾ ಮಾನದಂಡಗಳು ಕರ್ನಾಟಕ SC / ST / OBC ಅಭ್ಯರ್ಥಿಗಳಿಗೆ ಮಾತ್ರ ಅನ್ವಯಿಸುತ್ತದೆ.

5) UGNEET-2022 ಮಾಹಿತಿ ಪುಸ್ತಕದಲ್ಲಿ ನೀಡಿರುವ ಶೈಕ್ಷಣಿಕ ಅರ್ಹತೆಗಳನ್ನು ಹಾಗು ಇತರೆ ಮಾನದಂಡಗಳನ್ನು ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಾಧಿಕಾರದ ವೆಬ್‌ಸೈಟ್: **http://kea.kar.nic.in** ನಲ್ಲಿ ಪ್ರಚುರ ಪಡಿಸಲಾಗಿದೆ. ಅಭ್ಯರ್ಥಿಗಳು ವೈದ್ಯಕೀಯ, ದಂತವೈದ್ಯಕೀಯ ಮತ್ತು ಆಯುಷ್ ಕೋರ್ಸುಗಳ ಪ್ರವೇಶಕ್ಕಾಗಿ ನೊಂದಣಿ ಮಾಡಿಕೊಳ್ಳುವ ಮೊದಲು ಶೈಕ್ಷಣಿಕ ಅರ್ಹತೆ, ವಿವಿಧ ವರ್ಗಗಳ ಸೀಟುಗಳಿಗೆ ನಿಗದಿಪಡಿಸಿರುವ ಅರ್ಹತಾ ಮಾನದಂಡಗಳು ಮತ್ತು ಅಂತಹ ಸೀಟುಗಳಿಗೆ ನಿಗದಿಪಡಿಸಿರುವ ಅಭ್ಯರ್ಥಿಯ ಅರ್ಹತೆ ಹಾಗೂ ಇತ್ಯಾದಿ ಮಾನದಂಡಗಳನ್ನು ಓದಿಕೊಂಡು ನೊಂದಣಿ ಮಾಡಿಕೊಳ್ಳಲು ಸೂಚಿಸಿದೆ.

6) **ಆನ್‌ಲೈನ್ ಮೂಲಕ ನೊಂದಣಿ ಹಾಗು ಅರ್ಜಿ ಸಲ್ಲಿಸಲು ಪೋರ್ಟಲ್ ಅನ್ನು ದಿನಾಂಕ: 14–10–2022 ರ ಮಧ್ಯಾಹ್ನ 1.00 ರಿಂದ ತೆರೆಯಲಾಗಿದ್ದು, ಆಸಕ್ತ ಅರ್ಹ ಅಭ್ಯರ್ಥಿಗಳು ದಿನಾಂಕ: 19–10–2022 ರ ಸಂಜೆ 4.00 ರೊಳಗಾಗಿ ಆನ್‌ಲೈನ್ ಮೂಲಕ ನೊಂದಣಿ ಮಾಡಿ ಶುಲ್ಕವನ್ನು ಪಾವತಿಸಬಹುದಾಗಿದೆ. ಶುಲ್ಕ ಪಾವತಿಸಿದ ಅಭ್ಯರ್ಥಿಗಳು ದಿನಾಂಕ: 20–10–2022 ರ ರಾತ್ರಿ 11.59 ರವರೆಗೆ ಅರ್ಜಿ ಸಲ್ಲಿಸಬಹುದಾಗಿರುತ್ತದೆ.**

7) ನೊಂದಣಿ ಶುಲ್ಕ, ದಾಖಲಾತಿ ಪರಿಶೀಲನೆಯ ವೇಳಾಪಟ್ಟಿ, ದಾಖಲಾತಿ ಪರಿಶೀಲನೆಗೆ ಸಲ್ಲಿಸಬೇಕಾದ ಮೂಲ ದಾಖಲಾತಿಗಳು, ಹಾಗೂ ಇತರೆ ವಿವರಗಳನ್ನು ಪ್ರಾಧಿಕಾರದ ವೆಬ್‌ಸೈಟಿನಲ್ಲಿ ಪ್ರಕಟಿಸಲಾಗಿದೆ. ಆಸಕ್ತ ಅರ್ಹ ಅಭ್ಯರ್ಥಿಗಳು ಪ್ರಾಧಿಕಾರದ ವೆಬ್‌ಸೈಟಿನಲ್ಲಿ ನಿಗದಿತ ಲಿಂಕ್ ಅನ್ನು ಆಯ್ಕೆ ಮಾಡಿಕೊಂಡು ನೊಂದಣಿ ಮಾಡಿ, ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿ ದಾಖಲಾತಿ ಪರಿಶೀಲನೆಗೆ ಹಾಜರಾಗಬಹುದು.

### ನೊಂದಣಿ ಮಾಡಿ ದಾಖಲಾತಿ ಪರಿಶೀಲನೆಯನ್ನು ಪೂರ್ಣಗೊಳಿಸಿರುವ ಕರ್ನಾಟಕದ ಅಭ್ಯರ್ಥಿಗಳಿಗೆ ಮಾಹಿತಿ

ಈಗಾಗಲೇ ಯುಜಿಸಿಇಟಿ–2022ಕ್ಕೆ ನೊಂದಣಿ ಮಾಡಿ ದಾಖಲಾತಿ ಪರಿಶೀಲನೆಯನ್ನು ಪೂರ್ಣಗೊಳಿಸಿರುವವರು, ವೈದ್ಯಕೀಯ / ದಂತವೈದ್ಯಕೀಯ / ಆಯುಷ್ ಕೋರ್ಸುಗಳ ಪ್ರವೇಶಾತಿಗಾಗಿ ಕೆಇಎ ವೆಬ್‌ಪೋರ್ಟಲ್‌ನಲ್ಲಿ ಯುಜಿಸಿಇಟಿ–2022ಕ್ಕೆ ದಾಖಲಿಸಿದ್ದ USER ID ಮತ್ತು ಪಾಸ್‌ವರ್ಡ್ ದಾಖಲಿಸಿ, ಯುಜಿನೀಟ್ 2022ರ ರೋಲ್ ನಂಬರ್ ಅನ್ನು ನೊಂದಣಿಯಲ್ಲಿ ದಾಖಲಿಸಿ, OTP ಯನ್ನು ದಾಖಲಿಸಿ. ನಂತರ ಶುಲ್ಕವನ್ನು ಪಾವತಿಸಿ, ಅರ್ಜಿಯಲ್ಲಿನ ಮಾಹಿತಿಗಳನ್ನು ಪೂರ್ಣಗೊಳಿಸಿ, ಡಿಕ್ಲರೇಶನ್ ಮಾಡಬೇಕು. ತದ ನಂತರ ಅರ್ಜಿ ನಮೂನೆಯ ಮುದ್ರಿತ ಪ್ರತಿ ಪ್ರಿಂಟ್ ತೆಗೆದುಕೊಂಡು ಅರ್ಜಿಯಲ್ಲಿ ಮುದ್ರಿತವಾಗಿರುವ ನೀಟ್ ರೋಲ್ ನಂಬರ್ ಅನ್ನು ಪರಿಶೀಲಿಸಿಕೊಳ್ಳಿ.

- ಯುಜಿಸಿಇಟಿ–2022 ರಲ್ಲಿ ರ್‍ಯಾಂಕ್ ಅನ್ನು ಪಡೆದು ಸಿಇಟಿ–2006ರ ನಿಯಮದಂತೆ ಈಗಾಗಲೇ ದಾಖಲಾತಿ ಪರಿಶೀಲನೆಯನ್ನು ಪೂರ್ಣಗೊಳಿಸಿ, ಯುಜಿನೀಟ್ ಗಾಗಿ ಯಾವುದೇ ಬದಲಾವಣೆಯನ್ನು ಅರ್ಜಿಯಲ್ಲಿ ಮಾಡದಿರುವವರು ಅಥವಾ ಹೆಚ್ಚುವರಿಯಾಗಿ ಕ್ಲೇಮ್ ಮಾಡದಿರುವವರು, ವೈದ್ಯಕೀಯ / ದಂತವೈದ್ಯಕೀಯ ಕೋರ್ಸುಗಳಿಗೆ ಮತ್ತೊಮ್ಮೆ ದಾಖಲೆಗಳ ಪರಿಶೀಲನೆಗೆ ಹಾಜರಾಗುವಂತಿಲ್ಲ, ಆದರೆ ನಿಗದಿ ಪಡಿಸುವ ದಿನಾಂಕಗಳಂದು UG NEET-2022 Verification Slip ಅನ್ನು ಪ್ರಾಧಿಕಾರದ ವೆಬ್‌ಸೈಟಿನಿಂದ ಡೌನ್‌ಲೋಡ್ ಮಾಡಿಕೊಳ್ಳಬೇಕು.
- CET-2006 ನಿಯಮಗಳ ಅನ್ವಯ ಒಂದು ವೇಳೆ ಮೀಸಲಾತಿಗೆ ಸಂಬಂಧಿಸಿದ ಬದಲಾವಣೆ ಮಾಡಿಕೊಂಡಲ್ಲಿ ಅಥವಾ Linguistic Minority ಸೀಟುಗಳನ್ನು ಅಥವಾ Religious Minority ಅಥವಾ NRI Ward ಸೀಟುಗಳನ್ನು ಅಥವಾ St. John Medical College, Bangalore, (Category-2 to Category-8) ನಲ್ಲಿರುವ ನಿರ್ದಿಷ್ಟ ಸೀಟುಗಳನ್ನು ಪಡೆಯಲು ಅರ್ಹರಿದ್ದಲ್ಲಿ ಕೆಇಎ ವೆಬ್‌ಪೋರ್ಟಲ್ ನಲ್ಲಿ ನಿಗದಿತ ಲಿಂಕ್ ಅನ್ನು ಆಯ್ಕೆ ಮಾಡಿ, ಕ್ಲೇಮ್ ಮಾಡಿ, ನಂತರ ಕ್ಲೇಮ್‌ಗೆ ಸಂಬಂಧಿಸಿದ ಎಲ್ಲಾ ಅಗತ್ಯ ದಾಖಲೆಗಳೊಂದಿಗೆ ನಿಗದಿತ ದಿನಾಂಕಗಳಂದು ಪರಿಶೀಲನೆಗೆ ಹಾಜರಾಗಬೇಕು.

### ಕರ್ನಾಟಕೇತರ ಅಭ್ಯರ್ಥಿಗಳಿಗೆ ಮಾಹಿತಿ

ಕರ್ನಾಟಕೇತರ ಅಭ್ಯರ್ಥಿಗಳು, ಯುಜಿನೀಟ್ 2022 ರಲ್ಲಿ ಅರ್ಹತೆಯನ್ನು ಪಡೆದಿದ್ದರೆ, ವೈದ್ಯಕೀಯ / ದಂತ ವೈದ್ಯಕೀಯ ಕೋರ್ಸುಗಳ ಪ್ರವೇಶಾತಿಗಾಗಿ, ಅಭ್ಯರ್ಥಿಗಳು ಮೊದಲು ಕೆಇಎ ವೆಬ್‌ಪೋರ್ಟಲ್ ನಲ್ಲಿ ನೊಂದಣಿ ಮಾಡಿ, ಶುಲ್ಕವನ್ನು ಪಾವತಿಸಬೇಕು. ನಂತರ 12ನೇ ತರಗತಿಯ ಅಂಕಗಳನ್ನು ಕೆಇಎ ಪೋರ್ಟಲ್ ನಲ್ಲಿ ದಾಖಲಿಸಿ ಅಂಕಪಟ್ಟಿಯನ್ನು upload ಮಾಡಬೆಕು. ದಾಖಲೆಗಳ ಪರಿಶೀಲನೆಗೆ ಹಾಜರಾಗುವ ಅವಶ್ಯಕತೆ ಇರುವುದಿಲ್ಲ.

ಆದರೆ OCI / PIO / NRI / Foreign Nationals ಅಭ್ಯರ್ಥಿಗಳು, ಕರ್ನಾಟಕೇತರ ಅಭ್ಯರ್ಥಿಗಳು Religious Minority or NRI Ward seats ಸೀಟುಗಳನ್ನು ಅಥವಾ St. John Medical College, Bangalore, (Category-2 to Category-8) ನಲ್ಲಿ ನಿರ್ದಿಷ್ಟ ಸೀಟುಗಳನ್ನು ಪಡೆಯಲು ಅರ್ಹರಿದ್ದಲ್ಲಿ, ಅಂತಹ ಅಭ್ಯರ್ಥಿಗಳು ಮಾತ್ರ ನಿಗದಿತ ದಿನಾಂಕಗಳಂದು ದಾಖಲಾತಿ ಪರಿಶೀಲನೆಗೆ ಹಾಜರಾಗಬೇಕು.

8) 2022–23ನೇ ಸಾಲಿಗೆ ಕರ್ನಾಟಕ ರಾಜ್ಯದಲ್ಲಿನ ಸರ್ಕಾರಿ ವೈದ್ಯಕೀಯ / ದಂತವೈದ್ಯಕೀಯ ಕಾಲೇಜುಗಳಲ್ಲಿನ ವೈದ್ಯಕೀಯ ದಂತವೈದ್ಯಕೀಯ ಕೋರ್ಸುಗಳು, ಖಾಸಗಿ ಮತ್ತು ಅಲ್ಪ ಸಂಖ್ಯಾತ ವೈದ್ಯಕೀಯ / ದಂತ ವೈದ್ಯಕೀಯ ಕಾಲೇಜುಗಳಲ್ಲಿನ ಸರ್ಕಾರಿ ಕೋಟದ ಸೀಟುಗಳು, ಖಾಸಗಿ ವೈದ್ಯಕೀಯ / ದಂತ ವೈದ್ಯಕೀಯ (KPCF, KRLMPCA, AMPCK) ಸೀಟುಗಳಿಗೆ Karnataka Selection of Candidates for Admission to Government Seats in Professional Educational Institutions Rules, 2006 as amended from time to time ಹಾಗೂ as per the guidelines of MCI / DCI / Ministry of Health and Family Welfare, GOI / Government of India / Director Medical Education, Karnataka / Entrance Test Committee ಅನ್ವಯ KPCF, KRLMPCA, AMPCK ಕಾಲೇಜುಗಳಿಗೆ ಸರ್ಕಾರವು ನಿಗದಿಪಡಿಸುವ ಸೀಟುಗಳಿಗೆ ಏಕರೂಪದ ಕೌನ್ಸಿಲಿಂಗ್ ಅನ್ನು ನಡೆಸಲಾಗುವುದು.

9) UG-NEET-2022 ರಲ್ಲಿ ಅರ್ಹತೆಯನ್ನು ಪಡೆದ ಮಾತ್ರಕ್ಕೆ, ಅರ್ಹತಾ ಮಾನದಂಡಗಳನ್ನು ಪೂರೈಸದಿದ್ದಲ್ಲಿ / ನಿಗದಿತ ಪ್ರಮಾಣ ಪತ್ರಗಳನ್ನು ಸಲ್ಲಿಸದಿದ್ದಲ್ಲಿ ಅಭ್ಯರ್ಥಿಯು ಯಾವುದೇ ಹಕ್ಕನ್ನು ಹೊಂದುವುದಿಲ್ಲ.

10) ಮುಂದುವರಿದು, ನೊಂದಣಿ ಮಾಡಿಕೊಂಡು ದಾಖಲಾತಿ ಪರೀಶೀಲನೆಯನ್ನು ಯಶಸ್ವಿಯಾಗಿ ಪೂರೈಸುವ ಅಭ್ಯರ್ಥಿಗಳು ಮಾತ್ರ ಕರ್ನಾಟಕದಲ್ಲಿನ ಸರ್ಕಾರಿ / ಖಾಸಗಿ ಕಾಲೇಜುಗಳಲ್ಲಿ ವೈದ್ಯಕೀಯ / ದಂತ ವೈದ್ಯಕೀಯ ಕೋರ್ಸುಗಳಿಗೆ ಪ್ರವೇಶ ಪಡೆಯಲು ಅರ್ಹರಾಗುತ್ತಾರೆ. ನೊಂದಣಿ ಮಾಡದಿರುವ ಅಥವಾ ನೊಂದಣಿ ಮಾಡಿ ದಾಖಲಾತಿಗಳನ್ನು ಪರಿಶೀಲಿಸಿಕೊಳ್ಳದೆ ಇರುವ ಅಭ್ಯರ್ಥಿಗಳು ಪ್ರಾಧಿಕಾರದಿಂದಾಗಲೀ ಅಥವಾ ಕಾಲೇಜುಗಳಿಂದಾಗಲೀ ಸೀಟುಗಳನ್ನು ತೆಗೆದುಕೊಳ್ಳಲು ಅನುಮತಿಸಲಾಗುವುದಿಲ್ಲ, mop-up ಸುತ್ತಿನ ಸೀಟು ಹಂಚಿಕೆಯ ನಂತರ ಉಳಿಯಬಹುದಾದ ಸೀಟುಗಳನ್ನು ಆಯಾ ಕಾಲೇಜುಗಳಿಗೆ ವರ್ಗಾಯಿಸಲಾಗುತ್ತದೆ. ಈ ಸೀಟುಗಳನ್ನು ಭರ್ತಿ ಮಾಡಿಕೊಳ್ಳಲು, ಪ್ರಾಧಿಕಾರವು ಕಳುಹಿಸುವ ನೊಂದಣಿ ಮಾಡಿಕೊಂಡು ದಾಖಲಾತಿ ಪರಿಶೀಲನೆಯನ್ನು ಮಾಡಿಸಿದ ಆದರೆ ಯಾವುದೇ ಸೀಟುಗಳನ್ನು ಹಂಚಿಕೆ ಪಡೆಯದೇ ಇರುವ ಅಭ್ಯರ್ಥಿಗಳ ಪಟ್ಟಿಯ ಅನುಕ್ರಮದಂತೆ ಕಾಲೇಜುಗಳಲ್ಲಿ ಸೀಟುಗಳನ್ನು ಭರ್ತಿಮಾಡಿಕೊಳ್ಳಲಾಗುತ್ತದೆ. (ಭಾರತ ಸರ್ಕಾರದ ಸೂಚನೆಗಳ ಅನ್ವಯ)

**ಸೂಚನೆ:** UG-NEET-2022 ರಲ್ಲಿ ಅರ್ಹತೆ ಪಡೆದ ಎಲ್ಲಾ ಅಭ್ಯರ್ಥಿಗಳು ಕರ್ನಾಟಕ ರಾಜ್ಯದ ವೈದ್ಯಕೀಯ ಮತ್ತು ದಂತ ವೈದ್ಯಕೀಯ ಕೋರ್ಸುಗಳಿಗೆ ಪ್ರವೇಶ ಪಡೆಯಲು ಅರ್ಹರಾಗಲು ಆನ್‌ಲೈನ್ ಮೂಲಕ ನೊಂದಾಯಿಸಿಕೊಳ್ಳಲು ಮತ್ತು ದಾಖಲೆಗಳ ಪರಿಶೀಲನಾ ಪ್ರಕ್ರಿಯೆಯನ್ನು ಪೂರ್ಣಗೊಳಿಸಲು ಸೂಚಿಸಿದೆ.

ಹೆಚ್ಚಿನ ವಿವರಗಳಿಗಾಗಿ ಅಭ್ಯರ್ಥಿಗಳು ಪ್ರಾಧಿಕಾರದ ವೆಬ್‌ಸೈಟ್: **http://kea.kar.nic.in** ಗಮನಿಸಲು ಕೋರಿದೆ.

ಸಹಿ/–

(ಎಸ್. ರಮ್ಯ, ಭಾ.ಆ.ಸೇ)

**ಕಾರ್ಯನಿರ್ವಾಹಕ ನಿರ್ದೇಶಕರು**


ವಾಸಾಸಂಇ/ವಾ.ಪ್ರ/2596/2022–23


**Size: 16x28cm**